## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ: ಶ್ರೀ ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಿರಿಯಾಪಟ್ಟಣ, ಮತ್ತು ಇತರರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರ ಪತ್ರ ಸಂಖ್ಯೆ: ಇಎಸ್‌ಟಿ-2/30ಎ/2010-11 ದಿ.15-4-2013
2. ಸರ್ಕಾರದ ಕಾರಣ ಕೇಳುವ ನೋಟೀಸು ದಿನಾಂಕ: 02-04-2014
3. ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

-------

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಪತ್ರದಲ್ಲಿ ಪಿರಿಯಾಪಟ್ಟಣ ತಾಲ್ಲೂಕು ಕೋಮಲಾಪುರ ಗ್ರಾ.ಪಂ. ಯಲ್ಲಿ 2008-09 ರಿಂದ 2010-11ನೇ ಸಾಲಿನವರೆಗೆ ಎಂಜಿಎನ್‌ಆರ್‌ಇಜಿಎ ಕಾಮಗಾರಿಗಳ ಅನುಷ್ಠಾನದಡಿಯಲ್ಲಿ ರೂ. 1,94,72,311/-ಗಳ ಬೃಹತ್ ಮೊತ್ತದ ಹಣ ದುರುಪಯೋಗದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1. ಶ್ರೀ ಸಿ. ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಿರಿಯಾಪಟ್ಟಣ
2. ಶ್ರೀ ಕೆ. ಪಿ. ಸಿದ್ದಲಿಂಗಮೂರ್ತಿ, ಹಿಂದಿನ ಆಡಳಿತಾಧಿಕಾರಿ, ಕೋಮಲಾಪುರ ಗ್ರಾ.ಪಂ. ಹಾಗೂ ಹಿಂದಿನ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ, ಪಿರಿಯಾಪಟ್ಟಣ ತಾ.
3. ಶ್ರೀ ಕೆ. ಹೆಚ್. ತಿಮ್ಮಪ್ಪ, ಸಹಾಯಕ ಇಂಜಿನಿಯರ್, ಪಂ. ರಾಜ್ ಇಂ. ಉಪ ವಿಭಾಗ, ಪಿರಿಯಾಪಟ್ಟಣ ತಾಲ್ಲೂಕು.
4. ಶ್ರೀ ಎಸ್. ಟಿ. ಚಂದ್ರೇಗೌಡ, ಕೃಷಿ ಅಧಿಕಾರಿ, ಜಲಾನಯನ ಇಲಾಖೆ, ಪಿರಿಯಾಪಟ್ಟಣ ತಾಲ್ಲೂಕು.
5. ಶ್ರೀ ಎಂ. ಕೃಷ್ಣಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಇಲಾಖೆ ಪಿರಿಯಾಪಟ್ಟಣ ತಾಲ್ಲೂಕು.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಭಾಗಿಯಾಗಿರುವರೆನ್ನಲಾದ ಮೇಲ್ಕಂಡ ಅಧಿಕಾರಿ/ನೌಕರರುಗಳು ಎಸಗಿರುವ ಕರ್ತವ್ಯಲೋಪ/ದುರ್ನಡತೆಗಳ ಕುರಿತಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರಡಿ ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4 ನ್ನು) ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆರೋಪಿತ ಅಧಿಕಾರಿ/ನೌಕರರುಗಳು ಲಿಖಿತ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಅವರುಗಳ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅಪಾದಿತರ ಲಿಖಿತ ಹೇಳಿಕೆಗಳನ್ನು ಒಪ್ಪಲು ಸಮರ್ಥನೀಯವಾದ ಅಂಶಗಳು ಕಂಡು ಬಾರದಿರುವುದರಿಂದ ಅವರುಗಳ ವಿರುದ್ಧದ ಆರೋಪಗಳ ಕುರಿತಂತೆ ಸತ್ಯಾಸತ್ಯತೆಯನ್ನು ತಿಳಿಯಲು ವಿವರವಾದ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಅದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 127 ವಿಸೇಬಿ 2012 ಬೆಂಗಳೂರು ದಿನಾಂಕ:28-04-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

1. ಶ್ರೀ ಸಿ. ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಿರಿಯಾಪಟ್ಟಣ
2. ಶ್ರೀ ಕೆ. ಪಿ. ಸಿದ್ದಲಿಂಗಮೂರ್ತಿ, ಹಿಂದಿನ ಆಡಳಿತಾಧಿಕಾರಿ, ಕೋಮಲಾಪುರ ಗ್ರಾ.ಪಂ. ಹಾಗೂ ಹಿಂದಿನ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ, ಪಿರಿಯಾಪಟ್ಟಣ ತಾ.
3. ಶ್ರೀ ಕೆ. ಹೆಚ್. ತಿಮ್ಮಪ್ಪ, ಹಿಂದಿನ ಸಹಾಯಕ ಇಂಜಿನಿಯರ್, ಪಂ. ರಾಜ್ ಇಂ. ಉಪ ವಿಭಾಗ, ಪಿರಿಯಾಪಟ್ಟಣ ತಾಲ್ಲೂಕು.
4. ಶ್ರೀ ಎಸ್. ಟಿ. ಚಂದ್ರೇಗೌಡ, ಹಿಂದಿನ ಕೃಷಿ ಅಧಿಕಾರಿ, ಜಲಾನಯನ ಇಲಾಖೆ, ಪಿರಿಯಾಪಟ್ಟಣ ತಾಲ್ಲೂಕು.
5. ಶ್ರೀ ಎಂ. ಕೃಷ್ಣಪ್ಪ, ಹಿಂದಿನ ಸಹಾಯಕ ಕೃಷಿ ಅಧಿಕಾರಿ, ಜಲಾನಯನ ಇಲಾಖೆ ಪಿರಿಯಾಪಟ್ಟಣ ತಾಲ್ಲೂಕು.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಕುಕ್ಕಾಜಿ ರಾಮಕೃಷ್ಣ ಭಟ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಮೈಸೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಂದು ಆರೋಪಗಳಿಗೆ ಸಂಬಂಧಿಸಿದಂತೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/6/ ಸೇಇವಿ/2010 ದಿನಾಂಕ: 28-04-2011 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು,(ಎ & ಇ) ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು/ಬೆಂಗಳೂರು(ಗ್ರಾ)
5. ಶ್ರೀ ಕುಕ್ಕಾಜಿ ರಾಮಕೃಷ್ಣ ಭಟ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, 2-1ನೇ ಕ್ರಾಸ್, ಜ್ಯುಡಿಶಿಯಲ್ ಲೇಔಟ್, ಸಂಜಯನಗರ, ಬೆಂಗಳೂರು-560004
6. ಸರ್ಕಾರದ ಅಧೀನ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ) ಕೃಷಿ ಇಲಾಖೆ, ಬೆಂಗಳೂರು
8. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಮೈಸೂರು ( ಮಂಡನಾಧಿಕಾರಿ).
9. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರ ಮುಖಾಂತರ)
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
11. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO